ಬುಧವಾರ 06.08.2025 ಬೆಂಗಳೂರು ಗ್ರಾಮಾಂತರ ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 17 Digital Varthe Kannada Daily Volume 01 - Issue 17 Wednesday 06.08.2025 Price: 5/- Rs 2 Pages Bangalore Rural

DIGITAL VARTHE

www.digitalvarthe.com

# ಡಿಜಿಟಲ್ ವಾರ್ತೆ

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

# ನೆಲಮಂಗಲದಲ್ಲಿ ಇಂದು ಜನರೊಂದಿಗೆ ಜನತಾದಳ

## ಬೃಹತ್ ಬೈಕ್ ರ್ಯಾಲಿ, ಸಾರ್ವಜನಿಕ ಸಭೆ, ಜನಸಂಪರ್ಕ ಅಭಿಯಾನ

ನೆಲಮಂಗಲ: ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿಯವರ ನೇತೃತ್ವದಲ್ಲಿ ಇಂದು ನೆಲಮಂಗಲದಲ್ಲಿ 'ಜನರೊಂದಿಗೆ ಜನತಾದಳ' ಕಾರ್ಯಕ್ರಮ ನಡೆಯಲಿದ್ದು, ಸಾವಿರಾರು ಜನ, ಕಾರ್ಯಕರ್ತರು ಮತ್ತು ಯುವಕರು ಪಾಲ್ಗೊಳ್ಳಲಿರುವ ಈ ಕಾರ್ಯಕ್ರಮ ರಾಜಕೀಯ ಉತ್ಸಾಹಕ್ಕೆ ನೂತನ ಚೈತನ್ಯ ತುಂಬಲಿದೆ.

ಎಂವಿಎಂ ಕಲ್ಯಾಣ ಮಂಟಪದಲ್ಲಿ ನಡೆಯಲಿರುವ ಸಾರ್ವಜನಿಕ ಸಭೆಯಲ್ಲಿ ನಿಖಿಲ್ ಕುಮಾರಸ್ವಾಮಿ ಅವರು ಜನರೊಂದಿಗೆ ನೇರ ಸಂವಾದ ನಡೆಸಲಿದ್ದು, ಸ್ಥಳೀಯ ಸಮಸ್ಯೆಗಳು, ಅಭಿವೃದ್ಧಿ ಯೋಜನೆಗಳು, ಯುವಜನಾಂಗದ ಭವಿಷ್ಯ ಬಗ್ಗೆ ತಮ್ಮ ದೃಷ್ಟಿಕೋನವನ್ನು ಹಂಚಿಕೊಳ್ಳಲಿದ್ದಾರೆ. ಇದಲ್ಲದೆ, ಜೆಡಿಎಸ್ ಮಿಸ್ಡ್ ಕಾಲ್ ಅಭಿಯಾನ ಸಹ ನಡೆಯಲಿದ್ದು ಸಾವಿರಾರು ಕಾರ್ಯಕರ್ತರು ನೋಂದಣಿಯಾಗುವ ನಿರೀಕ್ಷೆ ಇದೆ.



AI ರಚಿತ ಚಿತ್ರ

ಈ ಕಾರ್ಯಕ್ರಮವು ಜೆಡಿಎಸ್ ಪಕ್ಷದ ಜನತಾಸಂಪರ್ಕ ಪ್ರಯತ್ನಗಳಲ್ಲಿ ಪ್ರಮುಖ ಹಂತವಾಗಿದ್ದು, ತಾಲೂಕಿನಲ್ಲಿ ಪಕ್ಷದ ಭವಿಷ್ಯದ ರಾಜಕೀಯ ಯೋಜನೆಗಳ ಆರಂಭಿಕ ಬಿಂದು ಎನ್ನಬಹುದು. ಸಾಮಾಜಿಕ ಜಾಲತಾಣಗಳಲ್ಲಿ ಕೂಡ ಈ ಕಾರ್ಯಕ್ರಮ ಈಗಾಗಲೇ ಚರ್ಚೆಗೆ ಗ್ರಾಸವಾಗಿದ್ದು, ಯುವಕರಿಂದ ಮಹಿಳೆಯರ ತನಕ ಎಲ್ಲ ವರ್ಗದ ಪಾಲ್ಗೊಳ್ಳುವಿಕೆ ನಿರೀಕ್ಷೆಯಲ್ಲಿದೆ. ಇನ್ನೂ ಕಾರ್ಯಕ್ರಮದಲ್ಲಿ ಮಾಜಿ ಪರಿಷತ್ ಸದಸ್ಯ ಈ. ಕೃಷ್ಣಪ್ಪ, ಮಾಜಿ ಶಾಸಕ ಶ್ರೀನಿವಾಸಮೂರ್ತಿ, ತಾಲೂಕು ಅಧ್ಯಕ್ಷ ತಿಮ್ಮರಾಯಪ್ಪ, ಕಾರ್ಯಾಧ್ಯಕ್ಷ ಟಿ.ರಾಜು ಬೂದಿಹಾಳ್, ಪ್ರಧಾನ ಕಾರ್ಯದರ್ಶಿ ಸುರೇಶ್, ಯುವ ಘಟಕದ ಅಧ್ಯಕ್ಷ ಅಂಜನಾಮೂರ್ತಿ, ಸುರೇಂದ್ರ, ಗೊಲ್ಲಹಳ್ಳಿ ಮಾಜಿ ಗ್ರಾಮ ಪಂಚಾಯ್ತಿ ಅಧ್ಯಕ್ಷ ಹರ್ಷ ಹೆಚ್.ಡಿ, ವಿಷ್ಣು ಕೆಂಪಲಿಂಗನಹಳ್ಳಿ, ಕನಕರಾಜು ಜಿಎನ್ ಸೇರಿದಂತೆ ಹಲವು ಮುಖಂಡರು ಸಾವಿರಾರು ಕಾರ್ಯಕರ್ತರು ಭಾಗಿಯಾಗಲಿದ್ದಾರೆ.

**ಬೈಕ್ ರ್ಯಾಲಿ:** ಕಾರ್ಯಕ್ರಮದ ಅಂಗವಾಗಿ ನಗರದ ಪ್ರಸಿದ್ಧ ಚೌಡೇಶ್ವರಿ ದೇವಾಲಯದಿಂದ ಬಸ್ ನಿಲ್ದಾಣ - ಸೊಂಡೆಕೊಪ್ಪ ರಸ್ತೆ ಮಾರ್ಗವಾಗಿ ಬೃಹತ್ ಬೈಕ್ ರ್ಯಾಲಿ ನಡೆಯಲಿದ್ದು, ಕಾರ್ಯಕ್ರಮದ ವೇದಿಕೆ ಸಮೀಪ ರ್ಯಾಲಿ ಕೊನೆಗೊಳ್ಳಲಿದೆ.

ಜೆಡಿಎಸ್ ತಾಲೂಕು ಯುವ ಘಟಕದ ಅಧ್ಯಕ್ಷ ಮತ್ತು ನಗರಸಭಾ ಸದಸ್ಯ ಅಂಜನಮೂರ್ತಿ ನೇತೃತ್ವ ವಹಿಸಲಿದ್ದು, ಸಾವಿರಕ್ಕೂ ಅಧಿಕ ಬೈಕ್‌ಗಳು ಪಾಲ್ಗೊಳ್ಳುವ ನಿರೀಕ್ಷೆಯಿದೆ. ಈ ಮೂಲಕ ಸ್ಥಳೀಯ ಯುವಶಕ್ತಿಯ ಸಾಮರ್ಥ್ಯ ಮತ್ತು ಜೆಡಿಎಸ್ ಪಕ್ಷದ ಸಂಘಟನೆ ಶಕ್ತಿ ಹೆಚ್ಚಾಗಲಿದೆ ಎನ್ನುತ್ತಿವೆ ರಾಜಕೀಯ ಮೂಲಗಳು.

**ನೂತನ ಪದಾಧಿಕಾರಿಗಳ ಆಯ್ಕೆ:** ಇತ್ತೀಚೆಗೆ ಹಲವು ಒಳ ಜಗಳಗಳು ಮತ್ತು ಗೊಂದಲಗಳಿಂದ ಉದ್ಭವಿಸಿದ್ದ ಸಮಸ್ಯೆಗೆ ಪರಿಹಾರವಾಗಿ ಇಂದು ತಾಲೂಕಿನ ಹಲವು ಕಾರ್ಯಕರ್ತರಿಗೆ ವಿವಿಧ ಪದಾಧಿಕಾರಿಗಳ ಹುದ್ದೆಗೆ ಆಯ್ಕೆ ಸಂಬಂಧ ನೇಮಕಾತಿ ಪತ್ರ ಸಹ ವಿತರಿಸಲಾಗುವುದು.

## ಮಾದರ ಚೆನ್ನಯ್ಯ ಗುರು ಪೀಠದಲ್ಲಿ ಬುದ್ಧ ಸ್ಮರಣೆ



ಚಿತ್ರದುರ್ಗ : ಆಗಸ್ಟ್ 10 ರಂದು ಟಿಬೇಟಿಯನ್ ಧರ್ಮ ಗುರು ದಲೈಲಾಮರವರ 90 ನೇ ಹುಟ್ಟುಹಬ್ಬವನ್ನು ಆಚರಿಸಲಾಗುವುದೆಂದು ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಹೇಳಿದರು.

ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಥ್ಯಾಂಕ್ಯು ಇಂಡಿಯಾ, ಥ್ಯಾಂಕ್ಯು ಕರ್ನಾಟಕ ಕೃತಜ್ಞತೆ ಸಲ್ಲಿಸುವುದಕ್ಕಾಗಿ ದಲೈಲಾಮರವರ ಹುಟ್ಟುಹಬ್ಬವನ್ನು ಮಾದರ ಚೆನ್ನಯ್ಯ ಗುರು ಪೀಠದಲ್ಲಿ ಆಚರಿಸಲು ಬೌದ್ದ ಭಿಕ್ಕುಗಳು ಇಷ್ಟಪಟ್ಟಿದ್ದಾರೆ. ಆಗಸ್ಟ್ 10 ರ ಬೆಳಿಗ್ಗೆ 9 ಗಂಟೆಗೆ ನೀಲಕಂಠೇಶ್ವರಸ್ವಾಮಿ ದೇವಸ್ಥಾನದಿಂದ ಪಥಸಂಚಲನ ಹೊರಡಲಿರುವ ಬೌದ್ಧ ಭಿಕ್ಕುಗಳು ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್, ರಾಜಾವೀರ ಮದಕರಿನಾಯಕ ಹಾಗೂ ಕನಕದಾಸರ ಪ್ರತಿಮೆಗಳಿಗೆ ಮಾಲಾರ್ಪಣೆ ಸಲ್ಲಿಸಲಿದ್ದಾರೆಂದು ತಿಳಿಸಿದರು.

ಸಚಿವರುಗಳಾದ ಸಂತೋಷ್‌ಲಾಡ್, ಕೆ.ಹೆಚ್. ಮುನಿಯಪ್ಪ, ಸಂಸದ ಗೋವಿಂದ ಕಾರಜೋಳ, ಮುಂಡಗೋಡಿನಿಂದ ರಿಂಚಿಮ್ ವಾಗ್ನೆ ಇವರುಗಳು ಹುಟ್ಟುಹಬ್ಬದಲ್ಲಿ ಪಾಲ್ಗೊಳ್ಳಲಿದ್ದು, ಅಂದು ಮಧ್ಯಾಹ್ನ ಮೂರು ಗಂಟೆಗೆ ಸೀಬಾರ ಸಮೀಪವಿರುವ ಎಸ್.ನಿಜಲಿಂಗಪ್ಪನವರ ಸಮಾಧಿ ಬಳಿ ಧ್ಯಾನ ಪೂಜೆ ನೆರವೇರಲಿದೆ ಎಂದರು.

ರಾಜ್ಯಸಭೆ ಮಾಜಿ ಸದಸ್ಯ ಹೆಚ್.ಹನುಮಂತಪ್ಪ ಮಾತನಾಡಿ ಚಿತ್ರದುರ್ಗಕ್ಕೂ ದಲೈಲಾಮರವರಿಗೂ ಅವಿನಾಭಾವ ಸಂಬಂಧವಿರುವುದರಿಂದ ಅವರ ಹುಟ್ಟುಹಬವನ್ನು ಇಲ್ಲಿ ಆಚರಿಸಲು ಅವರೆ ಇಚ್ಚೆ ವ್ಯಕ್ತಪಡಿಸಿದ್ದಾರೆ. ಜವಾಹರಲಾಲ್ ನೆಹರುರವರು ದೇಶದ ಪ್ರಧಾನಿಯಾಗಿದ್ದಾಗ ಕರ್ನಾಟಕದ ಮುಖ್ಯಮಂತ್ರಿ ಎಸ್. ನಿಜಲಿಂಗಪ್ಪನವರಿಗೆ ರಾಜ್ಯದಲ್ಲಿ ದಲೈಲಾಮರವರಿಗೆ ರಕ್ಷಣೆ ನೀಡುವಂತೆ ಸೂಚಿಸಿದ್ದರು. ಒಂದು ಲಕ್ಷ ನಲವತ್ತು ಸಾವಿರ ಸಂಸಾರಗಳು ದೇಶದಲ್ಲಿವೆ. ದಲೈಲಾಮರವರ ಜೊತೆ ಅಂದು ಎಂಬತ್ತು ಸಾವಿರ ಭಿಕ್ಕುಗಳು ನಮ್ಮ ದೇಶಕ್ಕೆ ಬಂದಿದ್ದರೆಂದರು.

ಆ.10 ರಂದು ಐದುನೂರು ಬೌದ್ಧ ಭಿಕ್ಕುಗಳು ದುರ್ಗಕ್ಕೆ ಬರುತ್ತಾರೆ. ನೀಲಕಂಠೇಶ್ವರಸ್ವಾಮಿ ದೇವಸ್ಥಾನದಿಂದ ಮೆರವಣಿಗೆ ಹೊರಡಲಿದೆ. ಸಚಿವ ಎಂ.ಬಿ.ಪಾಟೀಲ್ ಕಾರ್ಯಕ್ರಮ ಉದ್ಘಾಟಿಸುವರು ಎಂದು ಹೇಳಿದರು.

ಬಸವಕುಮಾರ ಸ್ವಾಮೀಜಿ ಮಾತನಾಡುತ್ತ ಇಂತಹ ಕಾರ್ಯಕ್ರಮಗಳಿಗೆ ಮುರುಘಾಮಠದ ಸಂಪೂರ್ಣ ಸಹಕಾರವಿದೆ. ಬಸವ ಸಮಾನತೆ, ಬುದ್ದ ಶಾಂತಿಯ ಸಂಕೇತ ಹಾಗಾಗಿ ಬಸವ ನಾಡಿನಲ್ಲಿ ಬುದ್ದನ ಸ್ಮರಣೆ ಆಚರಿಸಲಾಗುವುದು. ದಲೈಲಾಮ ಕರ್ನಾಟಕದ ಮೇಲೆ ಅಪಾರವಾದ ಗೌರವವಿಟ್ಟುಕೊಂಡಿದ್ದಾರೆ. ಭಾರತಕ್ಕೆ ಟಿಬೆಟಿಯನ್ನರು ಕೃತಜ್ಞತೆ ಸಲ್ಲಿಸುವ ಆಸೆಯಿಂದ ಅವರ ಹುಟ್ಟುಹಬ್ಬವನ್ನು ಇಲ್ಲಿ ಆಚರಿಸಲು ತೀರ್ಮಾನಿಸಿದ್ದಾರೆಂದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಕೆ.ಎಂ.ಹಾಲಸ್ವಾಮಿ, ಹೊಳಲ್ಕೆರೆಯ ಪಾಂಡುರಂಗಸ್ವಾಮಿ, ಕೆ.ಇ.ಬಿ.ಷಣ್ಮುಖಪ್ಪ, ನಗರಸಭೆ ಮಾಜಿ ಅಧ್ಯಕ್ಷರುಗಳಾದ ಹೆಚ್.ಮಂಜಪ್ಪ, ಹೆಚ್.ಜೆ.ಕೃಷ್ಣಮೂರ್ತಿ, ನ್ಯಾಯವಾದಿ ಬೀಸ್ನಳ್ಳಿ ಜಯಣ್ಣ ಇವರುಗಳು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ಮರಳು ಸಾಗಾಣಿಕೆ ಲಾರಿಗಳ ತಪಾಸಣೆ



ಮಸ್ಕಿ: ತಾಲೂಕಿನ ಬಳಗಾನೂರು ಪಟ್ಟಣದ ಪೊಲೀಸ್ ಠಾಣಾ ವ್ಯಾಪ್ತಿಯ ಜಾಲವಾಡಗಿ ಹಾಗೂ ಬುದ್ದಿನ್ನಿ ಗ್ರಾಮದ ಹತ್ತಿರ ರವಿವಾರದಂದು ಬೆಳಿಗ್ಗೆ ಮರಳು ಸಾಗಾಣಿಕೆಯಲ್ಲಿ ತೊಡಗಿದ್ದ 6 ಲಾರಿಗಳ ಮೇಲೆ ಪಿಎಸ್‌ಐ ಎರಿಯಪ್ಪ ಅಂಗಡಿ ಮಾರ್ಗದರ್ಶನದಲ್ಲಿ ಪೊಲೀಸರು ದಾಳಿ ನಡೆಸಿದರು.

ಈ ವೇಳೆ ಅಕ್ರಮ ಮರಳು ಸಾಗಾಣಿಕೆ ಮಾಡಲಾಗುತ್ತಿದ್ದ 3 ಲಾರಿಗಳನ್ನು ವಶಪಡಿಸಕೊಂಡು ಲಾರಿಗಳ ಚಾಲಕ, ಮಾಲೀಕ, ಹಾಗೂ ವಾಹನಗಳ ಮೇಲೆ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

## ಧರ್ಮಸ್ಥಳ ಕೇಸ್: ಮಹಿಳೆ ಸೇರಿ ಮೂವರ ಅಸ್ಥಿಪಂಜರ ಪತ್ತೆ

ಮಂಗಳೂರು: ಧರ್ಮಸ್ಥಳ ಸಾಮೂಹಿಕ ಸಮಾಧಿ ಪ್ರಕರಣಕ್ಕೆ ಸಂಬಂಧಿಸಿದಂತೆ ಕಳೆದ 6 ದಿನಗಳಿಂದ ಅನಾಮಿಕ ತೋರಿಸಿದ ಜಾಗದಲ್ಲಿ ಎಸ್‌ಐಟಿ ಅಧಿಕಾರಿಗಳು ಕಾರ್ಯಾಚರಣೆ ನಡೆಸುತ್ತಿದ್ದು, ಇದೀಗ ಪ್ರಕರಣಕ್ಕೆ ಬಿಗ್ ಟ್ವಿಸ್ಟ್ ಸಿಕ್ಕಿದೆ.

7ನೇ ದಿನವಾದ ಮಂಗಳವಾರವೂ ಉತ್ಕನನ ಕಾರ್ಯ ಪುನರಾರಂಭಿಸಿದ ವಿಶೇಷ ತನಿಖಾ ತಂಡ(SIT)ಕ್ಕೆ ಯಾವುದೇ ಮಾನವ ಅಸ್ಥಿಪಂಜರದ ಅವಶೇಷಗಳು ಕಂಡುಬಂದಿಲ್ಲ ಎನ್ನಲಾಗಿದೆ.

ಭಾರೀ ಮಳೆಯ ನಡುವೆ ಸಾಕ್ಷಿ-ದೂರುದಾರ ತೋರಿಸಿರುವ 11 ಮತ್ತು 12ನೇ ಸ್ಥಳಗಳಲ್ಲಿ SITಯ ತನಿಖಾಧಿಕಾರಿ ಮತ್ತು ಪುತ್ತೂರು ವಿಭಾಗದ ಸಹಾಯಕ ಆಯುಕ್ತ(AC) ಸ್ಟೆಲ್ಲಾ ವರ್ಗೀಸ್ ಅವರ ಮೇಲ್ವಿಚಾರಣೆಯಲ್ಲಿ ಇಂದು ಸಹ ಸಮಾಧಿ ಅಗೆಯುವ ಕಾರ್ಯ ನಡೆಸಲಾಯಿತು. ಆದರೆ ಯಾವುದೇ ಅವಶೇಷಗಳ ಕುರುಹು ಇಲ್ಲದ ಕಾರಣ SIT ಯ ಪ್ರಯತ್ನಗಳು ಯಾವುದೇ ಫಲಿತಾಂಶ ನೀಡಿಲ್ಲ. ಇಲ್ಲಿಯವರೆಗೆ SIT ಅಗೆದ 12 ಸ್ಥಳಗಳಲ್ಲಿ, ಕೇವಲ ಒಂದು ಸ್ಥಳದಲ್ಲಿ ಮಾತ್ರ ಮಾನವ ಅಸ್ಥಿಪಂಜರ ಪತ್ತೆಯಾಗಿದೆ ಎನ್ನಲಾಗಿದೆ. ಏತನ್ಮಧ್ಯೆ, ಧರ್ಮಸ್ಥಳದಲ್ಲಿ ದಶಕದ ಹಿಂದೆ ನಾಪತ್ತೆಯಾಗಿದ್ದರು ಎನ್ನಲಾದ ಎಂಬಿಬಿಎಸ್ ವಿದ್ಯಾರ್ಥಿನಿ ಅನನ್ಯ ಭಟ್ ಅವರ ತಾಯಿ ಸುಜಾತಾ ಭಟ್ ಅವರ ವಕೀಲರು, 'ಸೋಮವಾರ ದೂರುದಾರರು ತೋರಿಸಿದ ಸ್ಥಳಗಳನ್ನು ಅಗೆದ ನಂತರ ಮೂರು ಮಾನವ ಅಸ್ಥಿಪಂಜರಗಳು ಪತ್ತೆಯಾಗಿವೆ' ಎಂದು ಹೇಳಿಕೊಂಡಿದ್ದಾರೆ.

ಸುದ್ದಿ ಮತ್ತು ಜಾಹೀರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634



## 3ನೇ ಅಂತಸ್ತಿನಿಂದ ಬಿದ್ದು ಯುವತಿ ಸಾವು

ಬೆಂಗಳೂರು: ಬೆಂಗಳೂರು ಉತ್ತರ ತಾಲೂಕಿನ ಕಡಬಗೆರೆಯಲ್ಲಿ ಫಿಟ್ನೆಸ್ ಸೆಂಟರ್ ಒಂದರಲ್ಲಿ ರಿಸೆಪ್ಷನಿಸ್ಟ್ ಆಗಿ ಕೆಲಸ ಮಾಡುತ್ತಿದ್ದ ಯುವತಿಯೊಬ್ಬಳು ಮೂರನೇ ಅಂತಸ್ತಿನಿಂದ ಕೆಳಗೆ ಬಿದ್ದು ಸಾವನ್ನಪ್ಪಿದ್ದಾಳೆ. 20 ವರ್ಷದ ರಿಸೆಪ್ಷನಿಸ್ಟ್ ರಕ್ಷಿತಾ ಮೃತ ದುರ್ದೈವಿ. ಕಳೆದ ಎಂಟು ತಿಂಗಳಿನಿಂದ ರಕ್ಷಿತಾ ಜುನಿಫರ್ ಫಿಟ್ನೆಸ್ ಸೆಂಟರ್‌ನಲ್ಲಿ ರಿಸೆಪ್ಷನಿಸ್ಟ್ ಆಗಿ ಕೆಲಸ ಮಾಡುತ್ತಿದ್ದರು. ಫಿಟ್ನೆಸ್ ಸೆಂಟರ್‌ನ ಮೂರನೇ ಮಹಡಿಗೆ ಹೋಗಿ ಅಲ್ಲಿಂದ ಬಿದ್ದು ಮೃತಪಟ್ಟಿದ್ದಾರೆ. ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಆಗಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಜ್ವಲಂತ ಸಮಸ್ಯೆಗಳ ಪರಿಹಾರಕ್ಕೆ ಇಂದು ಹಟ್ಟಿ ಚಲೋ: ಸಂತೋಷ್ ಹಿರೆದಿನ್ನಿ

ರಾಯಚೂರು/ ಮಸ್ಕಿ: ಅನೇಕ ಸಲ ಮನವಿ ಮಾಡಿದರೂ ಜಿಲ್ಲೆಯ ಜ್ವಲಂತ ಸಮಸ್ಯೆಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪರಿಹಾರ ಒದಗಿಸಿಲ್ಲ. ಇದರಿಂದಾಗಿ ಇಂದು ಹಟ್ಟಿ ಚಿನ್ನದ ಗಣಿಗೆ ಆಗಮಿಸುತ್ತಿರುವ ಮುಖ್ಯಮಂತ್ರಿಗಳನ್ನು ಅಡ್ಡಗಟ್ಟಿ ಜ್ವಲಂತ ಸಮಸ್ಯೆಗಳ ಪರಿಹಾರಕ್ಕೆ ಆಗ್ರಹಿಸಲು ಸಿಪಿಐ(ಎಂಎಲ್) ರೆಡ್‌ಸ್ಟಾರ್, ಟಿಯುಸಿಐ, ಕರ್ನಾಟಕ ರೈತ ಸಂಘ (ಎಐಕೆಕೆಎಸ್) ನೇತೃತ್ವದಲ್ಲಿ ಜಿಲ್ಲೆಯ ರೈತರು, ಕಾರ್ಮಿಕರು, ಕೃಷಿ ಕೂಲಿಕಾರರು, ಭೂರಹಿತರು ಹಟ್ಟಿ ಚಲೋ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕೆಂದು



ಕರ್ನಾಟಕ ರೈತ ಸಂಘ( ಎ ಐ ಕೆ ಕೆ ಎಸ್) ತಾಲೂಕ ಅಧ್ಯಕ್ಷ ಸಂತೋಷ್ ಹಿರೇದಿನ್ನಿ ಕರೆ ನೀಡಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಜಿಲ್ಗೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈಗಾಗಲೇ 2 ಬಾರಿ ಆಗಮಿಸಿದಾಗ ಜಿಲ್ಲೆಯ ಸಮಸ್ಯೆಗಳ ಪರಿಹಾರ ಆಗುತ್ತವೆ ಎಂಬ ಭಾವನೆ ಇತ್ತು, ಜಿಲ್ಲೆಯ ಜನರಿಗೆ ಲಾಭವಾಗಿಲ್ಲ ಬದಲಾಗಿ ಕಾಂಗ್ರೆಸ್ ಪಕ್ಷದ ಶಾಸಕರು, ಸಚಿವರು ಹಾಗೂ ಅವರ ಹಿಂಬಾಲಕರಿಗೆ ಲಾಭವಾಯಿತೇ ವಿನಹಃ ಜನರ ಸಮಸ್ಯೆಗಳು ಪರಿಹಾರ ಸಿಗಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಹಟ್ಟಿ ಚಿನ್ನದ ಗಣಿಗೆ ಮುಖ್ಯಮಂತ್ರಿಗಳು ಇದೇ 6 ರಂದು ಆಗಮಿಸುತ್ತಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಗಮನಿಸಬೇಕಿರುವ ಅಂಶವೆಂದರೆ ಹಟ್ಟಿ ಚಿನ್ನದಗಣಿ ಕಂಪನಿಯ ಆಪತ್ಕಾಲದ ನಿಧಿ ₹1000 ಕೋಟಿ ಇದೆ. ಇದರಲ್ಲಿ 998.50 ಕೋಟಿ ರು. ವೆಚ್ಚದಲ್ಲಿ ಟೌನ್ಶಿಪ್ ನಿರ್ಮಾಣ, ₹25 ಕೋಟಿ ವೆಚ್ಚದಲ್ಲಿ ಕ್ರೀಡಾಂಗಣ ಕಾಮಗಾರಿ ಸೇರಿದಂತೆ ಕೆಲಸಗಳನ್ನು ಕೈಗೆತ್ತಿಗೊಳ್ಳುವ ಮೊದಲು ಆಪತ್ಕಾಲದ ಅನುದಾನವನ್ನು ಚಿನ್ನ ಗಣಿಗಾರಿಕೆ ವಿಸ್ತರಣೆಗೆ ಬಳಕೆ ಮಾಡಿದ್ದರೆ ಇಲ್ಲಿಯ ವಿದ್ಯಾವಂತ ಯುವಕರಿಗೆ ಉದ್ಯೋಗ ಸಿಗುತ್ತಿತ್ತು. ಸರ್ಕಾರದ ಹಣದಲ್ಲಿ ಅಭಿವೃದ್ಧಿ ಮಾಡಬೇಕಿತ್ತು. ಚಿನ್ನದ ಗಣಿ ಹಣ ಬಳಕೆ ಮಾಡುತ್ತಿರುವುದು ಕಂಪನಿಗೆ ಆಪತ್ತು ಎದುರಾದಾಗ ಹಣದ ಹೊಂದಾಣಿಕೆಗೆ ಕಷ್ಟಕರವಾಗಲಿದೆ. ಇದನ್ನು ಮುಖ್ಯಮಂತ್ರಿಗಳು ಗಮನಿಸಬೇಕೆಂದು ಒತ್ತಾಯಿಸಿದರು.

"ತುಂಗಭದ್ರ ಕಾರ್ಮಿಕರಿಗೆ 7 ತಿಂಗಳ ವೇತನ ಕೂಡಲೇ ವೇತನ ಪಾವತಿ ಮಾಡಬೇಕು, ಜವಳಗೇರಾದ 1064 ಎಕರೆ ಹೆಚ್ಚುವರಿ ಭೂಮಿ ಭೂ ರಹಿತರಿಗೆ ಹಂಚಿಕೆ ಮಾಡಬೇಕು, ಹಟ್ಟಿ ಚಿನ್ನದ ಗಣಿ ಆಪತ್ಕಾಲದ ನಿಧಿಯಡಿ ವಂದಲಿ, ಸಾನಬಾಳ, ಚಿಕ್ಕನಗನೂರಲ್ಲಿ ಗಣಿಗಾರಿಕೆ ಮಾಡಬೇಕು, ರಾಯಚೂರಿನ ಮಹರ್ಷಿ ಶ್ರೀ ವಾಲ್ಮೀಕಿ ವಿಶ್ವವಿದ್ಯಾಲಯಕ್ಕೆ ಜಮೀನು ನೀಡಿದ ರೈತರಿಗೆ ಪರಿಹಾರ ನೀಡಬೇಕು, ಅರಣ್ಯ ಭೂಮಿ ಸಾಗುವಳಿ ಮಾಡುವ ರೈತರ ಪಾರಂ ನಂಬರ್ ತಿರಸ್ಕಾರ ಮಾಡಿದ್ದು ಇದು ಘೋರ ಅನ್ಯಾಯವಾಗಿದೆ. ಕೂಡಲೇ ಬಡ ಸಾಗುವಳಿ ದಾರರಿಗೆ ಪಟ್ಟಾ ನೀಡಬೇಕು, ಸುರಾನ ಇಂಡಸ್ಟ್ರೀಸ್ ಕಂಪನಿ ಲಿಮಿಟೆಡ್ ಕಂಪನಿ ಮೇಲೆ ಕೇಸ್ ದಾಖಲಿಸಿ ಆಸ್ತಿ ಮುಟ್ಟುಗೋಲುಹಾಕ ಬೇಕೆಂದು ಆಗ್ರಹಿಸಿದರು.ಈ ವೇಳೆ ಕರ್ನಾಟಕ ರೈತ ಸಂಘದ ತಾಲೂಕ ಪ್ರಧಾನ ಕಾರ್ಯದರ್ಶಿ ಮಾರುತಿ ಜಿನ್ನಾಪುರ, ಇತರರು ಇದ್ದರು.

## ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳ ನೇಮಕಾತಿ ಅರ್ಜಿ ಆಹ್ವಾನ

ಚಿತ್ರದುರ್ಗ: ಜಿಲ್ಲೆಯ 7 ಶಿಶು ಅಭಿವೃದ್ಧಿ ಯೋಜನೆ ಕಚೇರಿ ವ್ಯಾಪ್ತಿಯಲ್ಲಿ ಖಾಲಿ ಇರುವ 29 ಅಂಗನವಾಡಿ ಕಾರ್ಯಕರ್ತೆ ಹಾಗೂ 228 ಅಂಗನವಾಡಿ ಸಹಾಯಕಿ ಹುದ್ದೆಗಳು ಸೇರಿ ಒಟ್ಟು 257 ಹುದ್ದೆಗಳನ್ನು ಗೌರವ ಸೇವೆಯ ಆಧಾರದಲ್ಲಿ ನೇಮಕಕ್ಕೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ದ್ವಿತಿಯ ಪಿಯುಸಿ ಹಾಗೂ ಸಹಾಯಕಿ ಹುದ್ದೆಗೆ ಎಸ್.ಎಸ್.ಎಲ್.ಸಿ ಉತ್ತೀರ್ಣರಾಗಿರಬೇಕು. 19 ರಿಂದ 35 ವರ್ಷದೊಳಗಿನ ಸ್ಥಳೀಯ ಮಹಿಳಾ ಅಥವಾ ಲಿಂಗತ್ವ ಅಲ್ಪಸಂಖ್ಯಾತ ಮಹಿಳಾ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಭರಮಸಾಗರ ಶಿಶು ಅಭಿವೃದ್ದಿ ಯೋಜನೆ ವ್ಯಾಪ್ತಿಯಲ್ಲಿ 7 ಕಾರ್ಯಕರ್ತೆ, 23 ಸಹಾಯಕಿ ಸೇರಿ 30 ಹುದ್ದೆಗಳು, ಚಿತ್ರದುರ್ಗದಲ್ಲಿ 2 ಕಾರ್ಯಕರ್ತೆ, 9 ಸಹಾಯಕಿ ಸೇರಿ 11 ಹುದ್ದೆಗಳು, ಚಳ್ಳಕೆರೆಯಲ್ಲಿ 2 ಕಾರ್ಯಕರ್ತೆ, 24 ಸಹಾಯಕಿ ಸೇರಿ 26 ಹುದ್ದೆಗಳು, ಹಿರಿಯೂರಿನಲ್ಲಿ 2 ಕಾರ್ಯಕರ್ತೆ, 53 ಸಹಾಯಕಿ ಸೇರಿ 55 ಹುದ್ದೆಗಳು, ಹೊಳಲ್ಕೆರೆಯಲ್ಲಿ 4 ಕಾರ್ಯಕರ್ತೆ, 45 ಸಹಾಯಕಿ ಸೇರಿ 49 ಹುದ್ದೆಗಳು, ಹೊಸದುರ್ಗದಲ್ಲಿ 11 ಕಾರ್ಯಕರ್ತೆ, 53 ಸಹಾಯಕಿ ಸೇರಿ 64 ಹುದ್ದೆಗಳು, ಮೊಳಕಾಲ್ಮೂರು ನಲ್ಲಿ 1 ಕಾರ್ಯಕರ್ತೆ, 21 ಸಹಾಯಕಿ ಸೇರಿ 22 ಹುದ್ದೆಗಳ ನೇಮಕಕ್ಕೆ ಪ್ರಕಟಣೆ ಹೊರಡಿಸಲಾಗಿದೆ.

ಸೆಪ್ಟೆಂಬರ್ 5 ಸಂಜೆ 5:30ರ ಒಳಗಾಗಿ ವೆಬ್‌ಸೈಟ್ https://karnemakaone.kar.inc.in/abcd/ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸುವ ಮುನ್ನ ಅಭ್ಯರ್ಥಿಗಳು ಬಳಕೆದಾರರ ಕೈಪಿಡಿಯಲ್ಲಿನ ಸೂಚನೆಗಳನ್ನು ಸ್ಪಷ್ಟವಾಗಿ ಓದಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ವಿಜಯಕುಮಾರ್ ತಿಳಿಸಿದ್ದಾರೆ.

## ಕೈಗಾರಿಕೆಗಳು ತ್ಯಾಜ್ಯ ನೀರನ್ನು ಸಂಸ್ಕರಣೆ ಮಾಡಿ: ಶಾಸಕ ಧೀರಜ್ ಮುನಿರಾಜು

ಬೆಂ.ಗ್ರಾ.ಜಿಲ್ಲೆ,: ದೊಡ್ಡಬಳ್ಳಾಪುರದ ಹಲವು ಭಾಗಗಳಲ್ಲಿ ಕೆಲವು ಕಾರ್ಖಾನೆಗಳು ಕಲುಷಿತ ಕೆಮಿಕಲ್ ತ್ಯಾಜ್ಯ, ಇನ್ನಿತರ ತ್ಯಾಜ್ಯವನ್ನು ಕೆರೆಗಳಿಗೆ, ಅರಣ್ಯ ಪ್ರದೇಶದಲ್ಲಿ ಸುರಿಯುತ್ತಿದ್ದಾರೆ. ಇದರಿಂದ ಅಂತರ್ಜಲ, ಮಣ್ಣು, ಗಾಳಿ ಕಲುಷಿತಗೊಳ್ಳುತ್ತಿದೆ. ತ್ಯಾಜ್ಯ ಸುರಿಯುವ ಕಾರ್ಖಾನೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ದೊಡ್ಡಬಳ್ಳಾಪುರ ಶಾಸಕ ಧೀರಜ್ ಮುನಿರಾಜು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ದೊಡ್ಡಬಳ್ಳಾಪುರ ನಗರಸಭೆ ಮತ್ತು ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿಗೆ ಸಂಬಂಧಿಸಿದಂತೆ ಎನ್.ಜಿ.ಟಿ ಆದೇಶ ಪಾಲನೆ, ಅಪೇರಲ್ ಪಾರ್ಕ್ ಗೆ ಸಂಬಂಧಿಸಿದಂತೆ ವಿವಿಧ ವಿಷಯಗಳ ಕುರಿತು ಚರ್ಚಿಸಲು ಕರೆಯಲಾಗಿದ್ದ ಜಂಟಿ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ದೊಡ್ಡಬಳ್ಳಾಪುರದ ಕೆರೆಗಳಿಗೆ ತ್ಯಾಜ್ಯ ನೀರು ಬಿಡುವ ಕಾರ್ಖಾನೆಗಳ ವಿರುದ್ಧ ಕಠಿಣ ಕ್ರಮ ಜರುಗಿಸಿ. ಕಾರ್ಖಾನೆಗಳಲ್ಲಿ ತ್ಯಾಜ್ಯ ಸಂಸ್ಕರಣಾ ಘಟಕ ಇದ್ದಲ್ಲಿ ಯಾವುದೇ ತ್ಯಾಜ್ಯ ಹೊರಗಡೆ ಬಿಡುವ ಅವಶ್ಯಕತೆ ಇಲ್ಲ. ಹಲವು ಕಾರ್ಖಾನೆಗಳು ಇದನ್ನು ಪಾಲನೆ ಮಾಡುತ್ತಿಲ್ಲ.

ಅಪೇರಲ್ ಪಾರ್ಕ್ ನಲ್ಲಿ ಸುಮಾರು 2 ರಿಂದ 3 ಲಕ್ಷ ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ. ಅಲ್ಲಿನ ಶೌಚಾಲಯ, ಕೊಳಚೆ ನೀರು ನೇರವಾಗಿ ಕೆರೆಗಳಿಗೆ, ಕಾಲುವೆಗಳಿಗೆ ಸೇರುತ್ತಿವೆ. ಕಾರ್ಖಾನೆಗಳಲ್ಲಿ ಸರಿಯಾಗಿ ಘನತ್ಯಾಜ್ಯ ನಿರ್ವಹಣೆ ಆಗುತ್ತಿಲ್ಲ ಎಂದರು.

ಗಾರ್ಮೆಂಟ್ಸ್ ಹಾಗೂ ಸಿದ್ದ ಉಡುಪು ತಯಾರಿಕಾ ಘಟಕಗಳಲ್ಲಿ ಕೆಮಿಕಲ್ ಮಿಶ್ರಿತ ಬಣ್ಣದ ನೀರು ಬಳಸಿ ಬಟ್ಟೆ ಸಿದ್ದ ಪಡಿಸುವವರು. ಬಟ್ಟೆ ಸಿದ್ಧವಾದ ನಂತರ ತ್ಯಾಜ್ಯ ನೀರನ್ನು ಹೊರಗೆ ಬಿಡುತ್ತಿದ್ದಾರೆ. ಆ ತ್ಯಾಜ್ಯ ನೀರನ್ನು ಕೂಡ ಸರಿಯಾದ ಕ್ರಮದಲ್ಲಿ ವಿಲೇವಾರಿ ಮಾಡಬೇಕು. ಇದರ ಜೊತೆಗೆ ಒಳಚರಂಡಿ ವ್ಯವಸ್ಥೆ ಆಗಬೇಕಿದೆ ಎಂದರು.






Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.